**ಓ.ಎಸ್. ನಂಃ 322/2022**

**ಪಿ.ಡಬ್ಲ್ಯೂಃ 1**

**ದಿನಾಂಕ 27.02.2025 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಯ ಪರ ಃ ಶ್ರೀ ಎಸ್.ಎನ್ ವಕೀಲರಿಂದಃ**

4.ಸರ್ವೆ ನಂಬರ್ 21/3 ರಲ್ಲಿ 14 ಗುಂಟೆ ಜಮೀನನ್ನು ಖರೀದಿ ಮಾಡಿದ ನಂತರ ಸದರಿ ಜಮೀನು 2 ನೇ ಪ್ರತಿವಾದಿಯ ಗಂಡನಾದ ಸುರೇಶರವರ ಹೆಸರಿಗೆ ಖಾತೆ ವರ್ಗಾವಣೆ ಆಗಿರುತ್ತದೆ ಎಂದರೆ ಸರಿಯಲ್ಲ. ತಮ್ಮ ಹೆಸರಿಗೆ ಖಾತೆ ವರ್ಗಾವಣೆ ಆದ ನಂತರದಲ್ಲಿ ಸದರಿ ಸರ್ವೆ ನಂಬರ್ 21/3 ರ 14 ಗುಂಟೆ ಜಮೀನಿನ ಸಂಬಂದ 2 ನೇ ಪ್ರತಿವಾದಿಯ ಗಂಡ ಸರಕಾರಕ್ಕೆ ತೆರಿಗೆ ಪಾವತಿಸುತ್ತಿದ್ದರು ಎಂದರೆ ಸರಿಯಲ್ಲ.

5. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿಗೆ 2 ನೇ ಪ್ರತಿವಾದಿಯ ಗಂಡನಾದ ಸುರೇಶರವರೇ ಸಂಪೂರ್ಣ ಮಾಲೀಕರಾಗಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪೈಕಿ 2 ನೇ ಪ್ರತಿವಾದಿಯ ಗಂಡ ಖರೀದಿಸಿದ 14 ಗುಂಟೆ ಜಮೀನಿನ ಮೇಲೆ ನನಗೆ ಯಾವುದೇ ಹಕ್ಕು ಮತ್ತು ಅಧಿಕಾರವಿಲ್ಲ ಎಂದರೆ ಸರಿಯಲ್ಲ. ನನಗೆ ಸದರಿ 14 ಗುಂಟೆ ಜಮೀನಿನ ಮೇಲೆ ಯಾವುದೇ ಹಕ್ಕು ಇಲ್ಲದಿದ್ದರೂ ಸಹ ಎಲ್ಲ ಸತ್ಯಾಂಶಗಳನ್ನು ಮರೆಮಾಚಿ ಈ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ.

6. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿಗೆ 2 ನೇ ಪ್ರತಿವಾದಿಯ ಗಂಡನಾದ ಸುರೇಶರವರೇ ಸಂಪೂರ್ಣ ಮಾಲೀಕರಾಗಿದ್ದು, ತಮ್ಮ ಜೀವಿತಾವಧಿಯಲ್ಲಿಯೇ ತಮ್ಮ ಸ್ವಇಚ್ಚೆಯಿಂದ ಸದರಿ ಆಸ್ತಿಯನ್ನು 2 ನೇ ಪ್ರತಿವಾದಿಯ ಹೆಸರಿಗೆ ಖಾತೆ ವರ್ಗಾವಣೆ ಮಾಡಿಸಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ತಮ್ಮ ಹೆಸರಿಗೆ ಖಾತೆ ವರ್ಗಾವಣೆಯಾದ ನಂತರದಲ್ಲಿ 2 ನೇ ಪ್ರತಿವಾದಿಯೇ ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿಗೆ ಸಂಪೂರ್ಣ ಮಾಲೀಕ ಮತ್ತು ಸ್ವಾಧೀನದಾರರಾಗಿರುತ್ತಾರೆ ಎಂದರೆ ಸರಿಯಲ್ಲ. ತಮ್ಮ ಹೆಸರಿಗೆ ಖಾತೆ ವರ್ಗಾವಣೆಯಾದ ನಂತರ ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿನ ಸಂಬಂದ 2 ನೇ ಪ್ರತಿವಾದಿಯೇ ಕಂದಾಯ ಪಾವತಿಸುತ್ತಿದ್ದಾರೆ ಎಂದರೆ ಸರಿಯಲ್ಲ.

7. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನನ್ನು ತಮ್ಮ ಹೆಸರಿಗೆ ಖಾತೆ ವರ್ಗಾವಣೆ ಮಾಡಿಸಿಕೊಂಡು ಸದರಿ 14 ಗುಂಟೆ ಜಮೀನಿನ ಮೇಲೆ 2 ನೇ ಪ್ರತಿವಾದಿಯು ಸಾಲಿಗ್ರಾಮದ ಎಸ್.ಬಿ.ಐ ಬ್ಯಾಂಕಿನಿಂದ ಸಾಲವನ್ನು ಪಡೆದು ಸದರಿ ಜಮೀನಿನಲ್ಲಿ ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ನನಗೆ ಸದರಿ ಎಲ್ಲ ವಿಷಯಗಳ ಬಗ್ಗೆ ಮಾಹಿತಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

8, ದಾವಾ ಆಸ್ತಿಯನ್ನು ನನ್ನ ಹೆಸರಿಗೆ ಖಾತೆ ವರ್ಗಾವಣೆ ಮಾಡುವಂತೆ ಕೋರಿ ಕಂದಾಯ ಇಲಾಖೆಗೆ ನಾನು ಅರ್ಜಿಯನ್ನು ಸಲ್ಲಿಸಿರುವುದಿಲ್ಲ. ದಾವಾ ಆಸ್ತಿ ನನಗೆ ಸೇರಿರದ ಕಾರಣ ನಾನು ದಾವಾ ಆಸ್ತಿಯನ್ನು ನನ್ನ ಹೆಸರಿಗೆ ಖಾತೆ ವರ್ಗಾವಣೆ ಮಾಡುವಂತೆ ಕೋರಿ ಕಂದಾಯ ಇಲಾಖೆಗೆ ಅರ್ಜಿಯನ್ನು ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪೈಕಿ 2 ನೇ ಪ್ರತಿವಾದಿಗೆ ಸೇರಿದ 14 ಗುಂಟೆ ಜಮೀನಿನ ಸ್ವಾಧೀನದಲ್ಲಿ ನಾನು ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪೈಕಿ 2 ನೇ ಪ್ರತಿವಾದಿಗೆ ಸೇರಿದ 14 ಗುಂಟೆ ಜಮೀನಿನ ಸ್ವಾಧೀನದಲ್ಲಿ ನಾನು ಇಲ್ಲದಿದ್ದರೂ ಸಹ ಸದರಿ ಜಮೀನನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

9. ಯಾರ ಹಕ್ಕು ಮತ್ತು ಒಡೆತನದಲ್ಲಿ ಆಸ್ತಿ ಇರುತ್ತದೆಯೋ ಅಂತ ವ್ಯಕ್ತಿಗಳಿಗೆ ಮಾತ್ರ ದಾಖಲೆಗಳನ್ನು ಪರಿಶೀಲಿಸಿ ಬ್ಯಾಂಕಿನಿಂದ ಸಾಲ ಮಂಜೂರಾಗುತ್ತದೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನು 2 ನೇ ಪ್ರತಿವಾದಿಯ ಮಾಲೀಕತ್ವ ಮತ್ತು ಸ್ವಾಧೀನದಲ್ಲಿರುವ ಕಾರಣ ಸಾಲಿಗ್ರಾಮ ಶಾಖೆಯ ಎಸ್.ಬಿ.ಐ ಬ್ಯಾಂಕಿನವರು ವಾದಿಗೆ ಸದರಿ ಜಮೀನಿನ ಮೇಲೆ ದಾಖಲಾತಿಗಳನ್ನು ಪರಿಶೀಲಿಸಿ ಸಾಲವನ್ನು ನೀಡಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಿಃ 08.02.1975 ರಂದು ದಾವಾ ಆಸ್ತಿಯನ್ನು ಖರೀದಿ ಮಾಡಿರುವುದಾಗಿ ಸುಳ್ಳು ಹೇಳಿ ಸುಮಾರು 48 ವರ್ಷಗಳ ನಂತರ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ನಾನು ಸುಳ್ಳು ದಾವೆಯನ್ನು ಹೂಡಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

10. ದಾವಾ ಆಸ್ತಿಯ ಪೈಕಿ 2 ನೇ ಪ್ರತಿವಾದಿಗೆ ಸೇರಿದ 14 ಗುಂಟೆ ಜಮೀನಿನ ಮೇಲೆ ನನಗೆ ಹಕ್ಕು ಮತ್ತು ಸ್ವಾಧೀನ ಇಲ್ಲ ಎಂದರೆ ಸರಿಯಲ್ಲ. ನಾನು ಈ ದಾವೆಯಲ್ಲಿ ಯಾವುದೇ ಪರಿಹಾರ ಕೇಳಿರುವುದಿಲ್ಲ. 1 ನೇ ಪ್ರತಿವಾದಿಯು ನನ್ನ ಗಂಡನ

ಸಹೋದರನಾಗಿರುತ್ತಾರೆ. ಸಾಕ್ಷಿಯು ಮುಂದುವರೆದು 1 ನೇ ಪ್ರತಿವಾದಿಯಿಂದ ನಾನು ದಾವಾ ಆಸ್ತಿಯನ್ನು ಖರೀದಿಸಿರುವುದಿಲ್ಲ ಎಂದು ಸ್ವತಃ ನುಡಿದಿರುತ್ತಾರೆ. ನಾನು ಎದಂದಿಗೂ ಸಹ ದಾವಾ ಆಸ್ತಿಯ ಸ್ವಾಧೀನದಲ್ಲಿ ಇರಲಿಲ್ಲ ಬದಲಾಗಿ 2 ನೇ ಪ್ರತಿವಾದಿಯೇ ದಾವಾ ಆಸ್ತಿಯ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯು ಕಂದಾಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನನ್ನು ತಮ್ಮ ಹೆಸರಿಗೆ ವರ್ಗಾವಣೆ ಮಾಡಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

11. 2 ನೇ ಪ್ರತಿವಾದಿ ನನಗೆ ತೊಂದರೆ ಕೊಟ್ಟಿರುತ್ತಾರೆ ಎಂದು ನಾನು ಎಂದಿಗೂ ಸಹ ಅವರ ವಿರುದ್ಧ ಪೋಲಿಸ್ ಠಾಣೆಯಲ್ಲಿ ದೂರು ನೀಡಿರುವುದಿಲ್ಲ. 2 ನೇ ಪ್ರತಿವಾದಿ ನನಗೆ ಯಾವುದೇ ತೊಂದರೆ ನೀಡಿರುವುದಿಲ್ಲ ಎಂದರೆ ಸಾಕ್ಷಿಯು ನನಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿದಿರುತ್ತಾರೆ. ಈ ದಾವೆಯನ್ನು ಹೂಡುವ ಉದ್ದೇಶಕ್ಕಾಗಿ ನಾನು ತಹಸೀಲ್ದಾರವರಿಂದ ಸುಳ್ಳು ಹಿಂಬರಹವನ್ನು ಸೃಷ್ಠಿಸಿರುತ್ತೇನೆ ಎಂದರೆ ಸಾಕ್ಷಿಯು ನನಗೆ ಏನು ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿನ ಸ್ವಾಧೀನದಲ್ಲಿ 2 ನೇ ಪ್ರತಿವಾದಿಯೇ ಇರುತ್ತಾರೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. 2 ನೇ ಪ್ರತಿವಾದಿ ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿನ ಸ್ವಾಧೀನದಲ್ಲಿ ಇರುವುದರಿಂದ ನನ್ನ ಸ್ವಾಧೀನಕ್ಕೆ ತೊಂದರೆ ಕೊಡುವ ಪ್ರಶ್ನೆ ಉದ್ಭವವಾಗುವುದಿಲ್ಲ ಎಂದರೆ ಸಾಕ್ಷಿಯು ನನಗೆ ಯಾವುದೇ ವಿಷಯ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

12. ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನನ್ನು 2 ನೇ ಪ್ರತಿವಾದಿಯ ಗಂಡ ಖರೀದಿಸಿದ್ದು, ಮೊದಲು ಸದರಿ ಸುರೇಶರವರು ದಾವಾ ಆಸ್ತಿಯ ಪೈಕಿ 14 ಗುಂಟೆ ಜಮೀನಿನ ಸ್ವಾಧೀನದಲ್ಲಿದ್ದು, ನಂತರದಲ್ಲಿ 2 ನೇ ಪ್ರತಿವಾದಿಯೇ ಸದರಿ ಜಮೀನಿನ ಸ್ವಾಧೀನದಲ್ಲಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಯಾವುದೇ ವಿಷಯ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ನನಗೆ ಎಲ್ಲ ಸತ್ಯ ವಿಷಯಗಳು ಗೊತ್ತಿದ್ದರೂ ಸಹ 2 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ.

13. ನೀವು ಎಂದಿಗೂ ಸಹ ದಾವಾ ಆಸ್ತಿಯ ಸ್ವಾಧೀನದಲ್ಲಿರಲಿಲ್ಲ ಎಂದರೆ ಸಾಕ್ಷಿಯು ನಾವೇ ದಾವಾ ಆಸ್ತಿಯಲ್ಲಿ ಜೋಳ ಮತ್ತು ರಾಗಿ ಉಳುಮೆ ಮಾಡಿಸುತ್ತಿದ್ದು, ನಮ್ಮ

ಅನಾರೋಗ್ಯದಿಂದಾಗಿ ಈಗ 2-3 ವರ್ಷಗಳಿಂದ ನಾವು ದಾವಾ ಆಸ್ತಿಯ ಬಳಿ ಹೋಗಿರುವುದಿಲ್ಲ ಎಂದು ನುಡಿದಿರುತ್ತಾರೆ. ನಾನು ಎಂದಿಗೂ ಸಹ ದಾವಾ ಆಸ್ತಿಯ ಸ್ವಾಧೀನದಲ್ಲಿ ಇರಲಿಲ್ಲ ಬದಲಾಗಿ 2 ನೇ ಪ್ರತಿವಾದಿಯೇ ದಾವಾ ಆಸ್ತಿಯ ಸ್ವಾಧೀನದಲ್ಲಿರುತ್ತಾರೆ ಎಂದರೆ ಸಾಕ್ಷಿಯು ನಾನು ಆಸ್ತಿಯನ್ನು ಖರೀದಿ ಮಾಡಿರುವುದು ಬಿಟ್ಟರೇ ನನಗೆ ಬೇರೆ ಏನು ವಿಷಯ ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

14. ನಾನು ಸಾಲಿಗ್ರಾಮದಲ್ಲಿ ವಾಸವಾಗಿದ್ದೇನೆ. ನೀವು ಸಾಲಿಗ್ರಾಮದಲ್ಲಿ ವಾಸವಿರುವ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಬಹುದಾ ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ನಾನು ನಂಜನಗೂಡಿನಲ್ಲಿ ವಾಸಿಸುತ್ತಿದ್ದು, ಸಾಲಿಗ್ರಾಮಕ್ಕೆ ಹೋಗುವುದು ಬರುವುದು ಮಾಡುತ್ತೇನೆ ಎಂದು ನುಡಿದಿರುತ್ತಾರೆ. ನನ್ನ ಆಧಾರ ಕಾರ್ಡ ಮತ್ತು ರೇಷನ ಕಾರ್ಡ ನಂಜನಗೂಡು ವಿಳಾಸದಲ್ಲಿದೆ ಎಂದರೆ ಸರಿ. ನನ್ನ ಗಂಡ ವ್ಯವಸಾಯ ಸೇವಾ ಸಹಕಾರ ಸಂಘದ ಕಾರ್ಯದರ್ಶಿಯಾಗಿ ನಂಜನಗೂಡಿನ ಹೇಮಾರಗಾಲದಲ್ಲಿ ಕೆಲಸದಲ್ಲಿ ಇದ್ದರು.

15. ತಮ್ಮ ಜೀವಿತಾವಧಿಯಲ್ಲಿ ತಮ್ಮ ಕುಟುಂಬದ ವ್ಯವಹಾರವನ್ನೆಲ್ಲ ನನ್ನ ಗಂಡನೆ ಮಾಡುತ್ತಿದ್ದರು ಎಂದರೆ ಸರಿ. ನಮ್ಮ ಕುಟುಂಬದಲ್ಲಿ ನಡೆಯುತ್ತಿದ್ದ ವ್ಯವಹಾರಗಳೆಲ್ಲ ನಿಮ್ಮ ಗಂಡನಿಗೆ ತಿಳಿಯುತ್ತಿತ್ತು ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ನನ್ನ ತವರು ಮನೆಯವರು ಕೊಟ್ಟ ಚಿನ್ನವನ್ನು ಮಾರಿ ನಾನು ದಾವಾ ಆಸ್ತಿಯನ್ನು ಖರೀದಿ ಮಾಡಿರುತ್ತೇನೆ ಎಂದು ನುಡಿದಿರುತ್ತಾರೆ. ಈ ದಾವೆಯನ್ನು ನಾನು ಸ್ವಯಂ ಪ್ರೇರಿತವಾಗಿ ಹೂಡಿರುವುದಿಲ್ಲ ಎಂದರೆ ಸರಿಯಲ್ಲ.

16. ಈಗ 3-4 ವರ್ಷಗಳ ಹಿಂದೆ ನಾನು ಬ್ಯಾಂಕಿಗೆ ಹೋಗಿದ್ದಾಗ ನನ್ನ ಹೆಸರಿಗೆ ದಾವಾ ಆಸ್ತಿ ವರ್ಗಾವಣೆಯಾಗದೆ ಇರುವುದು ನನಗೆ ತಿಳಿದುಬಂದಿರುತ್ತದೆ. ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಕೇಳುವ ಪ್ರಶ್ನೆಗಳಿಗೆಲ್ಲ ಸಾಕ್ಷಿದಾರರು ನನಗೆ ಏನು ಗೊತ್ತಿಲ್ಲ ಎಂದು ಪದೇ ಪದೇ ಹೇಳಿ ಪ್ರತಿವಾದಿ ಪರ ವಕೀಲರಿಗೆ ಪಾಟೀ ಸವಾಲಿನ ಪ್ರಶ್ನೆಗಳನ್ನು ಕೇಳಲು ಅನಾನುಕೂಲ ಮಾಡಿರುತ್ತಾರೆ.

17. ನನಗೆ 2 ನೇ ಪ್ರತಿವಾದಿಯ ಪರಿಚಯವಿಲ್ಲ. 2 ನೇ ಪ್ರತಿವಾದಿ ನನಗೆ ತೊಂದರೆ ಕೊಟ್ಟಿರುವುದಿಲ್ಲ ಹಾಗೂ ನಾನು 2 ನೇ ಪ್ರತಿವಾದಿಗೆ ತೊಂದರೆ ಕೊಟ್ಟಿರುವುದಿಲ್ಲ. ತಹಸೀಲ್ದಾರವರು ನ್ಯಾಯಾಲಯಕ್ಕೆ ಹೋಗುವಂತೆ ನನಗೆ ಹೇಳಿದ ಕಾರಣ ನಾನು ಈ

ದಾವೆಯನ್ನು ಹೂಡಿರುತ್ತೇನೆ ವಿನಃ ಇಷ್ಟನ್ನು ಹೊರತುಪಡಿಸಿ ನನಗೆ ಬೇರೆ ಏನು ಗೊತ್ತಿಲ್ಲ. 2 ನೇ ಪ್ರತಿವಾದಿಗೆ ಸೇರಿದ 14 ಗುಂಟೆ ಜಮೀನನ್ನು ಲಪಟಾಯಿಸುವ ಉದ್ದೇಶದಿಂದ ನಾನು ಈ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸಾಕ್ಷಿಯು ನನಗೆ ಏನು ಗೊತ್ತಿಲ್ಲ ಎಂದು ನುಡಿದಿರುತ್ತಾರೆ.

**ಮರುವಿಚಾರಣೆ ಇರುವುದಿಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**